# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ , ಬಿ. ಹೆಚ್. ರಸ್ತೆ , ತುಮಕೂರು – 572 103


ಸಂಖ್ಯೆ:ತುವಿ:ಅವಿ:ಸಾ.ಕ-4:2025-26/ 281

ದಿನಾಂಕ:12.12.2025

## : ಸುತ್ತೋಲೆ :

ವಿಷಯ : ಖಾಸಗಿ ಸಂಘ ಸಂಸ್ಥೆಗಳು/ಸಂಘಟನೆಗಳು, ಸರ್ಕಾರದ ಸ್ಥಳ / ಆವರಣ ಹಾಗೂ ಸಾರ್ವಜನಿಕ ಆಸ್ತಿಗಳನ್ನು ಬಳಸುವುದನ್ನು ನಿಯಂತ್ರಿಸುವ ಕುರಿತು.

ಉಲ್ಲೇಖ : 1. ಸರ್ಕಾರದ ನಡಾವಳಿ ದಿನಾಂಕ:18.10.2025

2. ಸರ್ಕಾರದ ಪತ್ರ ಸಂಖ್ಯೆ:ಹೆಚ್‌ಡಿ 501 ಎಸ್‌ಎಸ್‌ಟಿ 2025 ದಿನಾಂಕ:18.10.2025

3. ಮಾನ್ಯ ಜಿಲ್ಲಾಧಿಕಾರಿಗಳ ಪತ್ರ ಸಂಖ್ಯೆ:ಎಂ.ಎ.ಜಿ(1)ಸಿ.ಆರ್.62/2025-26 ದಿನಾಂಕ:18.10.2025

4. ಮಾನ್ಯ ಕುಲಪತಿಗಳ ಅನುಮೋದನೆಯ ದಿನಾಂಕ:08.12.2025 (ಕಂಡಿಕೆ–33)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಚಿವ ಸಂಪುಟ ಕೈಗೊಂಡಿರುವ ನಿರ್ಣಯ ಹಾಗೂ ಉಲ್ಲೇಖ (02) ರ ಸರ್ಕಾರದ ಪತ್ರದಲ್ಲಿ ತಿಳಿಸಿರುವಂತೆ, ಸರ್ಕಾರಿ ಸ್ವಾಮ್ಯದ ವ್ಯಾಪ್ತಿಗೆ ಬರುವ ಸರ್ಕಾರದ ಸ್ಥಳ / ಆವರಣ ಹಾಗೂ ಸಾರ್ವಜನಿಕ ಆಸ್ತಿಗಳನ್ನು, ಖಾಸಗಿ ಸಂಘ ಸಂಸ್ಥೆಗಳು/ಸಂಘಟನೆಗಳು ಬಳಸುವುದನ್ನು ನಿಯಂತ್ರಿಸುವ ಸಂಬಂಧ ಉಲ್ಲೇಖ (02) ರ ಘನ ಸರ್ಕಾರದ ಆದೇಶದಲ್ಲಿರುವ ಅಂಶಗಳ ಕುರಿತು ಕೂಲಂಕುಷವಾಗಿ ಪರಿಶೀಲಿಸಿಕೊಂಡು ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವಂತೆ ಮತ್ತು ಅಧೀನದ ಕಚೇರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಗಳ ಕಚೇರಿಗೆ ಮಾಹಿತಿಯನ್ನು ನೀಡುವಂತೆ ಉಲ್ಲೇಖ (03) ರ ಪತ್ರದಲ್ಲಿ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಮೇಲ್ಕಂಡ ಉಲ್ಲೇಖಿತ ನಡಾವಳಿ ಮತ್ತು ಪತ್ರಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದ್ದು, ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಸರ್ಕಾರದ ಸ್ಥಳ / ಆವರಣ ಹಾಗೂ ಸಾರ್ವಜನಿಕ ಆಸ್ತಿಗಳನ್ನು ಖಾಸಗಿ ಸಂಘ ಸಂಸ್ಥೆಗಳು/ಸಂಘಟನೆಗಳು ಬಳಸುವುದನ್ನು ನಿಯಂತ್ರಿಸುವ ಸಂಬಂಧ ಸರ್ಕಾರದ ನಡಾವಳಿ, ಉಲ್ಲೇಖ (02) ರ ಪತ್ರ ಮತ್ತು ಉಲ್ಲೇಖ (03) ರ ಮಾನ್ಯ ಜಿಲ್ಲಾಧಿಕಾರಿಗಳ ಪತ್ರದಲ್ಲಿನ ಅಂಶಗಳಂತೆ ಅಗತ್ಯ ಕ್ರಮಕೈಗೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

ಉಪಕುಲಸಚಿವರು

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಕರಡು ಪ್ರತಿ ಮಾನ್ಯ ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ.

ಗೆ,

1. ಮಾನ್ಯ ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಕಾರ್ಯಪಾಲಕ ಅಭಿಯಂತರರು, ಅಭಿಯಂತರರ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಎಸ್ಟೇಟ್ ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಂಯೋಜಕರು, ಜ್ಞಾನಸಿರಿ ಕ್ಯಾಂಪಸ್, ತುಮಕೂರು ವಿಶ್ವವಿದ್ಯಾನಿಲಯ, ಬಿದರೆಕಟ್ಟೆ.
6. ಸಂಯೋಜಕರು, ತಿಪಟೂರು ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು.
7. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ.

ಪ್ರತಿಗಳು :

1. ಸಿಸ್ಟಂ ಅನಾಲಿಸ್ಟ್, ಗಣಕಯಂತ್ರ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ಈ ಸುತ್ತೋಲೆಯನ್ನು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸಲು ಹಾಗೂ ಸಂಬಂಧಿಸಿದವರಿಗೆ ಇ-ಮೇಲ್ ಕಳುಹಿಸಲು ಅಗತ್ಯ ಕ್ರಮವಹಿಸುವುದು.**
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಚೇರಿ ಪ್ರತಿ.

ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

# ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ತುಮಕೂರು ಜಿಲ್ಲೆ, ತುಮಕೂರು

ದೂರವಾಣಿ: 0816-2272480 ಇ-ಮೇಲ್: deo.tumkur@gmail.com

ಸಂಖ್ಯೆ: ಎಂ.ಎ.ಜಿ(1)ಸಿ.ಆರ್: 62/2025-26 ದಿನಾಂಕ: 18.10.2025

ಗೆ,

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ತುಮಕೂರು
2. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ತುಮಕೂರು
3. ಆಯುಕ್ತರು, ಮಹಾನಗರ ಪಾಲಿಕೆ, ತುಮಕೂರು
4. ಉಪಕುಲಪತಿಗಳು, ತುಮಕೂರು ವಿಶ್ವವಿದ್ಯಾಲಯ
5. ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ತುಮಕೂರು
6. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ತುಮಕೂರು
7. ಆಯುಕ್ತರು, ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ
8. ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ತುಮಕೂರು (ದ) ಮತ್ತು ಮಧುಗಿರಿ ಶೈಕ್ಷಣಿಕ ಜಿಲ್ಲೆ
9. ಉಪ ನಿರ್ದೇಶಕರು, ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆ, ತುಮಕೂರು ಜಿಲ್ಲೆ, ತುಮಕೂರು
10. ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ತುಮಕೂರು (ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ಕ್ರೀಡಾಂಗಣಗಳು)
11. ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ತುಮಕೂರು
12. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ತುಮಕೂರು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ ಮುಖ್ಯಾಧಿಕಾರಿಗಳು
13. ಮುಖ್ಯ ಅಭಿಯಂತರರು, ತುಮಕೂರು ಜಿಲ್ಲಾ ವ್ಯಾಪ್ತಿಯ ಜಲಾಶಯಗಳು
14. ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು (ಅನ್ವಯಿಸುವ)
15. ಉಪವಿಭಾಗಾಧಿಕಾರಿಗಳು, ತುಮಕೂರು/ ಮಧುಗಿರಿ/ ತಿಪಟೂರು ಉಪವಿಭಾಗ
16. ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರುಗಳು
17. ತಹಶೀಲ್ದಾರ್, ಮುಜರಾಯಿ ಇಲಾಖೆ, ಜಿಲ್ಲಾಧಿಕಾರಿಗಳ ಕಛೇರಿ, ತುಮಕೂರು
18. ಜಿಲ್ಲೆಯ ಎಲ್ಲಾ 'ಎ' ಮತ್ತು 'ಬಿ' ಸಮೂಹದ ದೇವಸ್ಥಾನಗಳ ಕಾರ್ಯನಿರ್ವಾಹಕ ಅಧಿಕಾರಿಗಳು

ಮಾನ್ಯರೆ,

ವಿಷಯ: ಖಾಸಗಿ ಸಂಘ ಸಂಸ್ಥೆಗಳು/ ಸಂಘಟನೆಗಳು ಸರ್ಕಾರದ ಸ್ಥಳ / ಆವರಣ ಹಾಗೂ ಸಾರ್ವಜನಿಕ ಆಸ್ತಿಗಳನ್ನು ಬಳಸುವುದನ್ನು ನಿಯಂತ್ರಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಸರ್ಕಾರದ ಜಂಟಿ ಕಾರ್ಯದರ್ಶಿ, ಕಾನೂನು ಮತ್ತು ಸುವ್ಯವಸ್ಥೆ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ರವರ ಟಿಪ್ಪಣಿ ಸಂಖ್ಯೆ ಹೆಚ್‌ಡಿ 501 ಎಸ್ ಎಸ್ ಟಿ 2025, ದಿನಾಂಕ: 18.10.2025.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಟಿಪ್ಪಣಿಯಲ್ಲಿ ದಿನಾಂಕ: 16-10-2025 ರ ಸಚಿವ ಸಂಪುಟದಲ್ಲಿ ಕೈಗೊಳ್ಳಲಾದ ಈ ಕೆಳಕಂಡ ನಿರ್ಣಯಗಳ ಬಗ್ಗೆ ತಿಳಿಸಲಾಗಿರುತ್ತದೆ.

1) ಸರ್ಕಾರದ / ಸರ್ಕಾರಿ ಸಾಮ್ಯದ / ನಿಗಮ/ ಮಂಡಳಿಗಳು ಶಾಲಾ-ಕಾಲೇಜುಗಳು, ಅನುದಾನಿತ ಶಿಕ್ಷಣ ಸಂಸ್ಥೆಗಳು, ಉದ್ಯಾನವನಗಳು, ಆಟದ ಮೈದಾನಗಳು, ಸಾರ್ವಜನಿಕ ರಸ್ತೆಗಳು, ತೆರೆದ ಸ್ಥಳಗಳು ಮತ್ತು ಇತರ ಆಸ್ತಿ/ ಜಾಗಗಳು ನಾಗರೀಕರ ಸದ್ಬಳಕೆಗೆ ನಿರ್ದಿಷ್ಟಪಡಿಸಲಾಗಿರುತ್ತದೆ. ಇವುಗಳನ್ನು ಸಾರ್ವಜನಿಕರು ಬಳಸಲು ಯಾವುದೇ ಅಡಚಣೆಗಳು, ಬೆದರಿಕೆಗಳು ಉದ್ಭವಿಸದಂತೆ ಕ್ರಮವಹಿಸುವುದು

..2..

ಅತ್ಯಗತ್ಯವಾಗಿರುತ್ತದೆ. ಹಾಗೆಯೇ ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳು, ಸಾರ್ವಜನಿಕರ ಸಾರ್ವತ್ರಿಕ ಅಸಮಾಧಾನಗಳನ್ನು ನಿವಾರಿಸುವುದು ಸಹ ಅವಶ್ಯವಾಗಿರುತ್ತದೆ.

2) ರಾಜ್ಯದಲ್ಲಿ ಹಲವಾರು ಖಾಸಗಿ ಸಂಸ್ಥೆಗಳು, ಸಂಘಗಳು ತಮ್ಮ ಚಟುವಟಿಕೆಗಳು, ಪ್ರಚಾರ, ತರಬೇತಿ, ಉತ್ಸವಗಳು ಹಾಗೂ ಸದಸ್ಯರ ಮತ್ತು ಬೆಂಬಲಿಗರ ಸಭೆಗಳು ನಡೆಸುವ ಉದ್ದೇಶದಿಂದ ಸಾರ್ವಜನಿಕ ಸ್ಥಳಗಳು ಸರ್ಕಾರದ ಆಸ್ತಿಗಳು, ಜಮೀನುಗಳು, ಆಟದ ಮೈದಾನಗಳು, ಸಾರ್ವಜನಿಕ ರಸ್ತೆಗಳು ಇತ್ಯಾದಿಗಳನ್ನು ಸರ್ಕಾರ ಅಥವಾ ಸಂಬಂಧಿತ ಇಲಾಖೆಗೆ ಮುಂಚಿತವಾಗಿ ಅನುಮತಿ ಪಡೆಯದೆ, ಅನೇಕ ಸಂದರ್ಭಗಳಲ್ಲಿ ಮಾಹಿತಿ ನೀಡದೆ ಬಳಸಿಕೊಳ್ಳುತ್ತಿರುವುದು ಕಂಡುಬಂದಿದೆ. ಇಂತಹ ಕ್ರಿಯೆಗಳು ಅಕ್ರಮ ಪ್ರವೇಶ (Tresspass) ಎಂದು ಪರಿಗಣಿಸಲ್ಪಡುತ್ತವೆ ಮತ್ತು ಸಾರ್ವಜನಿಕ ಸುರಕ್ಷತೆಗೆ ಗಂಭೀರ ಬೆದರಿಕೆಯನ್ನು ಉಂಟುಮಾಡುತ್ತವೆ. ಈ ಕಾರಣದಿಂದ ಸರ್ಕಾರದ ಯಾವುದೇ ಆಸ್ತಿ / ಸ್ಥಳದ ಬಳಕೆಯನ್ನು ಸಾರ್ವಜನಿಕ ಹಿತದೃಷ್ಟಿಯಿಂದ ನಿಯಂತ್ರಿಸುವ ಸಲುವಾಗಿ ಯಾವುದೇ ಸಂಘಟನೆ, ಸಂಸ್ಥೆ, ಸಂಘವು ಆಯಾ ಸಾರ್ವಜನಿಕ ಆಸ್ತಿ/ ಸ್ಥಳದ ಮಾಲೀಕತ್ವ ಹೊಂದಿದ ಸಕ್ಷಮ ಪ್ರಾಧಿಕಾರಗಳಿಂದ ಪೂರ್ವಾನುಮತಿ ಪಡೆದು ಬಳಸಿಕೊಳ್ಳಲು ಅನುಮತಿ ನೀಡುವುದು ಅಗತ್ಯವಾಗಿರುತ್ತದೆ.

3) ಯಾವುದೇ ಚಟುವಟಿಕೆಗಳು ಸಾರ್ವಜನಿಕರಿಗೆ ಅನಾನುಕೂಲವಾಗುವುದಾದಲ್ಲಿ, ಹಾಗೂ ಸಂಬಂಧಿಸಿದ ಸಂಸ್ಥೆಗಳ ಆವರಣ/ ಜಾಗದಲ್ಲಿ ನಡೆಯುವ ಚಟುವಟಿಕಗಳಿಂದ ಆ ಸಂಸ್ಥೆಗಳ ಮೂಲ ಧ್ಯೇಯಕ್ಕೆ ಧಕ್ಕೆ ಉಂಟಾಗುವುದಾದಲ್ಲಿ ಅಂತಹ ಚಟುವಟಿಕೆಗಳ ಆಯೋಜನೆಗೆ ಸಕ್ಷಮ ಪ್ರಾಧಿಕಾರಗಳು ಅನುಮತಿಯನ್ನು ನಿರಾಕರಿಸತಕ್ಕದ್ದು.

4) ಈ ಕೆಳಕಂಡ ಸಾರ್ವಜನಿಕ ಸ್ಥಳಗಳಲ್ಲಿ ನಡೆಸಲಾಗುವ ಖಾಸಗಿ ಸಂಘ, ಸಂಸ್ಥೆಗಳು, ಸಂಘಟನೆಗಳ ಚಟುವಟಿಕೆಗಳಿಗೆ ಅವುಗಳ ಎದುರಿಗೆ ನಮೂದಿಸಲಾದ ಮಾಲಿಕತ್ವ ಹೊಂದಿದ ಸಕ್ಷಮ ಪ್ರಾಧಿಕಾರಗಳು ಅನುಮತಿ ನೀಡುವುದನ್ನು ಪರಿಶೀಲಿಸತಕ್ಕದ್ದು: -

- ಸರ್ಕಾರದ/ಸರ್ಕಾರಿ ಸಾಮ್ಯದ ಶಾಲಾ-ಕಾಲೇಜುಗಳು, ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಆವರಣ - ಉನ್ನತ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ.
- ಉದ್ಯಾನವನಗಳು, ಆಟದ ಮೈದಾನಗಳು, ಇತರ ತೆರದ ಸ್ಥಳಗಳು - ನಗರಾಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
- ಸಾರ್ವಜನಿಕ ರಸ್ತೆಗಳು, ಸರ್ಕಾರದ ಇತರ ಆಸ್ತಿ/ ಸ್ಥಳಗಳು - ಸಂಬಂಧಿಸಿದ ಜಿಲ್ಲಾಧಿಕಾರಿಗಳು, ಪೊಲೀಸ್ ಆಯುಕ್ತರು/ ಪೊಲೀಸ್ ಅಧೀಕ್ಷಕರು.

5) ಮೇಲೆ ನಮೂದಿಸಿದ ಇಲಾಖೆ, ಸಕ್ಷಮ ಪ್ರಾಧಿಕಾರಗಳು ಇಂತಹ ಅನುಮತಿ ನೀಡುವ ಸಂದರ್ಭದಲ್ಲಿ ಸಂವಿಧಾನ ಬದ್ಧವಾದ ನಾಗರಿಕರ ಹಕ್ಕುಗಳಿಗೆ ಚ್ಯುತಿ ಉಂಟಾಗದಂತೆ ಎಚ್ಚರಿಕೆ ವಹಿಸಲು ಅನುವಾಗುವಂತೆ ಸೂಕ್ತ ವಿವರವಾದ ಮಾರ್ಗಸೂಚಿಯನ್ನು ಆಯಾ ಇಲಾಖೆಗಳು ಹೊರಡಿಸತಕ್ಕದ್ದು.

..3..

ಸಚಿವ ಸಂಪುಟವು ಕೈಗೊಂಡಿರುವ ಮೇಲಿನ ನಿರ್ಣಯದಂತೆ ಒಳಾಡಳಿತ ಇಲಾಖೆಯಿಂದ ಹೊರಡಿಸಲಾಗಿರುವ ಆದೇಶ ಸಂಖ್ಯೆ GO NO. HD 501 SST, 2025, BENGALURU, DATE 18.10.2025 ರಲ್ಲಿ ತಿಳಿಸಿರುವಂತೆ, ಆಯಾ ಇಲಾಖಾ ವ್ಯಾಪ್ತಿಗೆ ಸಂಬಂಧಿಸಿದಂತೆ, ಸೂಕ್ತ ಮಾರ್ಗಸೂಚಿಗಳನ್ನು ಹೊರಡಿಸಲು ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿರುತ್ತದೆ. ಸದರಿ ಸರ್ಕಾರದಿಂದ ಬಂದಿರುವ ದಿನಾಂಕ: 18.10.2025 ರಂದು ಟಿಪ್ಪಣಿಯನ್ನು ತಮ್ಮ ವಿವರವಾದ ಮಾಹಿತಿ/ ಕ್ರಮಕ್ಕಾಗಿ ಲಗತ್ತಿಸಿದೆ.

ಮುಂದುವರೆದು, ಹೊಸ ಮಾರ್ಗಸೂಚಿಯನ್ನು ಜಾರಿಗೊಳಿಸುವವರೆಗೆ, ಉಲ್ಲೇಖಿತ ಆದೇಶದಲ್ಲಿ ನಮೂದಿಸಿರುವ ಸಕ್ಷಮ ಪ್ರಾಧಿಕಾರವು ಚಾಲ್ತಿಯಲ್ಲಿರುವ ತಮ್ಮ ಇಲಾಖೆಯ ಮಾರ್ಗಸೂಚಿಯನ್ನು ಗಮನದಲ್ಲಿಟ್ಟುಕೊಂಡು ಹಾಗೂ ಸದರಿ ಆದೇಶದಲ್ಲಿ ಉಲ್ಲೇಖಿಸಿರುವ ಸಿದ್ಧಾಂತಗಳನ್ನು ಪಾಲಿಸಿ ನ್ಯಾಯಿಕ ಆದೇಶವನ್ನು ಹೊರಡಿಸಲು ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಲಾಗಿರುತ್ತದೆ.

ಆದ್ದರಿಂದ, ಉಲ್ಲೇಖಿತ ಟಿಪ್ಪಣಿ ಹಾಗೂ ಸರ್ಕಾರದ ಆದೇಶ ಸಂಖ್ಯೆ GO NO. HD 501 SST, 2025, BENGALURU, DATE 18.10.2025 ಗಳ ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸುತ್ತಾ, ಘನ ಸರ್ಕಾರದ ಆದೇಶದಲ್ಲಿರುವ ಅಂಶಗಳ ಕುರಿತು ಕೂಲಂಕಷವಾಗಿ ಪರಿಶೀಲಿಸಿಕೊಂಡು, ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವಂತೆ ಹಾಗೂ ತಮ್ಮ ಅಧೀನ ಕಛೇರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಹಾಗೂ ಕೈಗೊಂಡ ಕ್ರಮದ ಬಗ್ಗೆ ಈ ಕಚೇರಿಗೆ ಮಾಹಿತಿಯನ್ನು ನೀಡಲು ತಿಳಿಸಲಾಗಿದೆ.

ತಮ್ಮ ವಿಶ್ವಾಸಿ

18/11/2025

ಜಿಲ್ಲಾಧಿಕಾರಿ
ತುಮಕೂರು ಜಿಲ್ಲೆ

ಪ್ರತಿಯನ್ನು:
ಮಾನ್ಯ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಕಾನೂನು ಮತ್ತು ಸುವ್ಯವಸ್ಥೆ, ಕರ್ನಾಟಕ ಸರ್ಕಾರದ ಸಚಿವಾಲಯ, ವಿಧಾನಸೌಧ, ಬೆಂಗಳೂರು ರವರ ಮಾಹಿತಿಗಾಗಿ.

ಕರ್ನಾಟಕ ಸರ್ಕಾರ

ಸಂಖ್ಯೆ:ಹೆಚ್‌ಡಿ 501 ಎಸ್‌ಎಸ್‌ಟಿ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:18-10-2025.

"ತುರ್ತು-ಇಂದೇ"

## ಟಿಪ್ಪಣಿ

ವಿಷಯ:- ಖಾಸಗಿ ಸಂಘ ಸಂಸ್ಥೆಗಳು/ ಸಂಘಟನೆಗಳು ಸರ್ಕಾರದ ಸ್ಥಳ / ಆವರಣ ಹಾಗೂ ಸಾರ್ವಜನಿಕ ಆಸ್ತಿಗಳನ್ನು ಬಳಸುವುದನ್ನು ನಿಯಂತ್ರಿಸುವ ಬಗ್ಗೆ.

ಉಲ್ಲೇಖ:- ಆದೇಶ ಸಂಖ್ಯೆ:ಹೆಚ್‌ಡಿ 501 ಎಸ್‌ಎಸ್‌ಟಿ 2025, ದಿನಾಂಕ:18-10-2025.

@@@@

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:16-10-2025ರ ಸಚಿವ ಸಂಪುಟದಲ್ಲಿ ಕೆಳಕಂಡಂತೆ ನಿರ್ಣಯ ಕೈಗೊಳ್ಳಲಾಗಿದೆ:-

1) ಸರ್ಕಾರದ / ಸರ್ಕಾರಿ ಸಾಮ್ಯದ / ನಿಗಮ/ಮಂಡಳಿಗಳ ಶಾಲಾ-ಕಾಲೇಜುಗಳು, ಅನುದಾನಿತ ಶಿಕ್ಷಣ ಸಂಸ್ಥೆಗಳು, ಉದ್ಯಾನವನಗಳು, ಆಟದ ಮೈದಾನಗಳು, ಸಾರ್ವಜನಿಕ ರಸ್ತೆಗಳು, ತೆರೆದ ಸ್ಥಳಗಳು ಮತ್ತು ಇತರೆ ಆಸ್ತಿ / ಜಾಗಗಳು ನಾಗರೀಕರ ಸದ್ಬಳಕೆಗೆ ನಿರ್ದಿಷ್ಟಪಡಿಸಲಾಗಿರುತ್ತದೆ. ಇವುಗಳನ್ನು ಸಾರ್ವಜನಿಕರು ಬಳಸಲು ಯಾವುದೇ ಅಡಚಣೆಗಳು, ಬೆದರಿಕೆಗಳು ಉದ್ಭವಿಸದಂತೆ ಕ್ರಮವಹಿಸುವುದು ಅತ್ಯಗತ್ಯವಾಗಿರುತ್ತದೆ. ಹಾಗೆಯೇ ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳು, ಸಾರ್ವಜನಿಕರ ಸಾರ್ವತ್ರಿಕ ಅಸಮಾಧಾನಗಳನ್ನು ನಿವಾರಿಸುವುದು ಸಹ ಅವಶ್ಯವಾಗಿರುತ್ತದೆ.

2) ರಾಜ್ಯದಲ್ಲಿ ಹಲವಾರು ಖಾಸಗಿ ಸಂಸ್ಥೆಗಳು, ಸಂಘಗಳು ತಮ್ಮ ಚಟುವಟಿಕೆಗಳು, ಪ್ರಚಾರ, ತರಬೇತಿ, ಉತ್ಸವಗಳು ಹಾಗೂ ಸದಸ್ಯರ ಮತ್ತು ಬೆಂಬಲಿಗರ ಸಭೆಗಳು ನಡೆಸುವ ಉದ್ದೇಶದಿಂದ ಸಾರ್ವಜನಿಕ ಸ್ಥಳಗಳು / ಸರ್ಕಾರದ ಆಸ್ತಿಗಳು, ಜಮೀನುಗಳು, ಆಟದ ಮೈದಾನಗಳು, ಸಾರ್ವಜನಿಕ ರಸ್ತೆಗಳು ಇತ್ಯಾದಿಗಳನ್ನು ಸರ್ಕಾರ ಅಥವಾ ಸಂಬಂಧಿತ ಇಲಾಖೆಗೆ ಮುಂಚಿತವಾಗಿ ಅನುಮತಿ ಪಡೆಯದೆ, ಅನೇಕ ಸಂದರ್ಭಗಳಲ್ಲಿ ಮಾಹಿತಿ ನೀಡದೆ ಬಳಸಿಕೊಳ್ಳುತ್ತಿರುವುದು ಕಂಡುಬಂದಿದೆ. ಇಂತಹ ಕ್ರಿಯೆಗಳು ಅಕ್ರಮ ಪ್ರವೇಶ (Tresspass) ಎಂದು ಪರಿಗಣಿಸಲ್ಪಡುತ್ತವೆ ಮತ್ತು ಸಾರ್ವಜನಿಕ ಸುರಕ್ಷತೆಗೆ ಗಂಭೀರ ಬೆದರಿಕೆಯನ್ನು ಉಂಟುಮಾಡುತ್ತವೆ. ಈ ಕಾರಣದಿಂದ ಸರ್ಕಾರದ ಯಾವುದೇ ಆಸ್ತಿ / ಸ್ಥಳದ ಬಳಕೆಯನ್ನು ಸಾರ್ವಜನಿಕ ಹಿತದೃಷ್ಟಿಯಿಂದ ನಿಯಂತ್ರಿಸುವ ಸಲುವಾಗಿ ಯಾವುದೇ ಸಂಘಟನೆ, ಸಂಸ್ಥೆ, ಸಂಘವು ಆಯಾ ಸಾರ್ವಜನಿಕ ಆಸ್ತಿ/ಸ್ಥಳದ ಮಾಲೀಕತ್ವ ಹೊಂದಿದ ಸಕ್ಷಮ ಪ್ರಾಧಿಕಾರಗಳಿಂದ ಪೂರ್ವಾನುಮತಿ ಪಡೆದು ಬಳಸಿಕೊಳ್ಳಲು ಅನುಮತಿ ನೀಡುವುದು ಅಗತ್ಯವಾಗಿರುತ್ತದೆ.

...2...

Scanned with OKEN Scanne

3) ಯಾವುದೇ ಚಟುವಟಿಕೆಗಳು ಸಾರ್ವಜನಿಕರಿಗೆ ಅನಾನುಕೂಲವಾಗುವುದಾದಲ್ಲಿ ಹಾಗೂ ಸಂಬಂಧಿಸಿದ ಸಂಸ್ಥೆಗಳ ಆವರಣ/ಜಾಗದಲ್ಲಿ ನಡೆಯುವ ಚಟುವಟಿಕೆಗಳಿಂದ ಆ ಸಂಸ್ಥೆಗಳ ಮೂಲ ಧ್ಯೇಯಕ್ಕೆ ಧಕ್ಕೆ ಉಂಟಾಗುವುದಾದಲ್ಲಿ ಅಂತಹ ಚಟುವಟಿಕೆಗಳ ಆಯೋಜನೆಗೆ ಸಕ್ಷಮ ಪ್ರಾಧಿಕಾರಗಳು ಅನುಮತಿಯನ್ನು ನಿರಾಕರಿಸತಕ್ಕದ್ದು.

4) ಈ ಕೆಳಕಂಡ ಸಾರ್ವಜನಿಕ ಸ್ಥಳಗಳಲ್ಲಿ ನಡೆಸಲಾಗುವ ಖಾಸಗಿ ಸಂಘ, ಸಂಸ್ಥೆಗಳು, ಸಂಘಟನೆಗಳ ಚಟುವಟಿಕೆಗಳಿಗೆ ಅವುಗಳ ಎದುರಿಗೆ ನಮೂದಿಸಲಾದ ಮಾಲಿಕತ್ವ ಹೊಂದಿದ ಸಕ್ಷಮ ಪ್ರಾಧಿಕಾರಗಳು ಅನುಮತಿ ನೀಡುವುದನ್ನು ಪರಿಶೀಲಸತಕ್ಕದ್ದು:-

- ಸರ್ಕಾರದ/ಸರ್ಕಾರಿ ಸಾಮ್ಯದ ಶಾಲಾ-ಕಾಲೇಜುಗಳು, ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಆವರಣ - **ಉನ್ನತ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ**
- ಉದ್ಯಾನವನಗಳು, ಆಟದ ಮೈದಾನಗಳು, ಇತರೆ ತೆರೆದ ಸ್ಥಳಗಳು - **ನಗರಾಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.**
- ಸಾರ್ವಜನಿಕ ರಸ್ತೆಗಳು, ಸರ್ಕಾರದ ಇತರ ಆಸ್ತಿ/ ಸ್ಥಳಗಳು - **ಸಂಬಂಧಿಸಿದ ಜಿಲ್ಲಾಧಿಕಾರಿಗಳು, ಪೊಲೀಸ್ ಆಯುಕ್ತರು/ ಪೊಲೀಸ್ ಅಧೀಕ್ಷಕರು.**

5) ಮೇಲೆ ನಮೂದಿಸಿದ ಇಲಾಖೆ, ಸಕ್ಷಮ ಪ್ರಾಧಿಕಾರಗಳು ಇಂತಹ ಅನುಮತಿ ನೀಡುವ ಸಂದರ್ಭದಲ್ಲಿ ಸಂವಿಧಾನ ಬದ್ಧವಾದ ನಾಗರಿಕರ ಹಕ್ಕುಗಳಿಗೆ ಚ್ಯುತಿ ಉಂಟಾಗದಂತೆ ಎಚ್ಚರಿಕೆ ವಹಿಸಲು ಅನುವಾಗುವಂತೆ ಸೂಕ್ತ, ವಿವರವಾದ ಮಾರ್ಗಸೂಚಿಯನ್ನು ಆಯಾ ಇಲಾಖೆಗಳು ಹೊರಡಿಸತಕ್ಕದ್ದು.

ಸಚಿವ ಸಂಪುಟವು ಕೈಗೊಂಡಿರುವ ಮೇಲಿನ ನಿರ್ಣಯದಂತೆ ಒಳಾಡಳಿತ ಇಲಾಖೆಯಿಂದ ಹೊರಡಿಸಲಾಗಿರುವ ಉಲ್ಲೇಖಿತ ಆದೇಶವನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಆದೇಶದಲ್ಲಿ ತಿಳಿಸಿರುವಂತೆ, ಆಯಾ ಇಲಾಖಾ ವ್ಯಾಪ್ತಿಗೆ ಸಂಬಂಧಿಸಿದಂತೆ, **ಸೂಕ್ತ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲು ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿದೆ.**

ಮುಂದುವರೆದು, ಹೊಸ ಮಾರ್ಗಸೂಚಿಯನ್ನು ಜಾರಿಗೊಳಿಸುವವರೆಗೆ, ಉಲ್ಲೇಖಿತ ಆದೇಶದಲ್ಲಿ ನಮೂದಿಸಿರುವ ಸಕ್ಷಮ ಪ್ರಾಧಿಕಾರವು ಚಾಲ್ತಿಯಲ್ಲಿರುವ ತಮ್ಮ ಇಲಾಖೆಯ ಮಾರ್ಗಸೂಚಿಯನ್ನು ಗಮನದಲ್ಲಿಟ್ಟುಕೊಂಡು ಹಾಗೂ ಸದರಿ ಆದೇಶದಲ್ಲಿ ಉಲ್ಲೇಖಿಸಿರುವ ಸಿದ್ಧಾಂತಗಳನ್ನು ಪಾಲಿಸಿ ನ್ಯಾಯಿಕ ಆದೇಶವನ್ನು ಹೊರಡಿಸಲು ಕ್ರಮಕೈಗೊಳ್ಳುವುದು.

Scanned with OKEN Scanne

ಈ ಕುರಿತು ಹೊರಡಿಸಲಾದ ಮಾರ್ಗಸೂಚಿಯ ಪ್ರತಿಯನ್ನು ಒಳಾಡಳಿತ ಇಲಾಖೆಗೆ ಕಳುಹಿಸುವುದು.

(ಅರ್ಚನ ಎಂ.ಎಸ್)
ಸರ್ಕಾರದ ಜಂಟಿ ಕಾರ್ಯದರ್ಶಿ,
(ಕಾನೂನು & ಸುವ್ಯವಸ್ಥೆ).

ಇವರಿಗೆ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ..
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಾರ್ವಜನಿಕ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ.
3. ಸರ್ಕಾರದ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ / ನಗರಾಭಿವೃದ್ಧಿ ಇಲಾಖೆ / ವೈದ್ಯಕೀಯ ಶಿಕ್ಷಣ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
4. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು / ಪೊಲೀಸ್ ವರಿಷ್ಠಾಧಿಕಾರಿಗಳು.
5. ಎಲ್ಲಾ ಪೊಲೀಸ್ ಆಯುಕ್ತರುಗಳು.

Scanned with OKEN Scanne

## Proceedings of Government of Karnataka

**Sub:** Regulation of use of Government Properties and premises by Private organisation, associations or group of persons-order.

**Read:** Letter No.L&O/MISC/157/2025, dated:15.10.2025 of the Director General and Inspector General of Police, Bengaluru.

**Preamble:-**

It has come to the notice of the Government that various private organisations, associations and groups have been using Government properties and premises for organising and performing private programmes and events without any prior permission of the competent authorities. Further it is noticed that, the usage of such government properties and premises are not being preserved and maintained properly during such programmes and events and thereafter. Consequently the Government properties and premises are being affected adversely. Therefore to preserve, protect and proper utilisation of Government properties and premises , play grounds, parks , roads and other public assets it is feasble to regulate the usage and maintenance of Government properties and premises with prior approval and orders of the competent authority.

The jurisdictional Deputy Commissioner and Commissioner of Police are to be considered as competent authority, to consider the applications, grant permissions, regulate the permitted functions, programmes and take legal action against the unpermitated usage, illegal occupation or encroachment of Government properties and premises to ensure public safety and preservation of Government properties.



Scanned with OKEN Scanne

The Karnataka Police Act 1963 provides provisions for regulating traffic and for preservation of order in public places etc., The said provisions are mutatis-mutandis be made applicable for the purpose of regulating usage of Government properties and premises.

The Government have examined the proposal of DG & IGP, carefully and hence the following order.

**GOVERNMENT ORDER NO HD 501 SST 2025, BANGALURU, DATE 18.10.2025**

In view of the above, the Government of Karnataka hereby orders that any private orgination, association or group of persons shall use the Government property or premises only upon the prior permision of the concerned competentnt authority. For the purpose of this order, the terms, definations and authorities are provided as under :-

(a) Government property means and includes any land, building, structure, road, park, play ground, waterbody or any other immovable property owned and manged by local authority or department, Boards, croporation, under the control or vested in, entrusted with or maintained by the Government of Karnataka.

(b) "Competent authority" means the jurisdictional Commissioner of Police or Deputy Commissioner of the District or any other officers authorised by the Government.

(c) "organisation" means any private association, society, trust, club, body of individuals or any other entity, whether registered or



Scanned with OKEN Scanne

4

not, other than local authority or Government departments and undertakings.

(d) "Procession or Rally" means congregation of more than 10 people called by any name, who are accompanied by music or otherwise, any other activity having a common object to carry on a common movement or route march passing through a Government property except marriage and funeral gatherings and movements.

(e) The terms defined under the Karnataka Police Act 1963 be read along with this Government Order.

I) " Licence & Permission to use Government Properties & premises"

(a) The applicant shall apply before 3 days of the intended programme or event in writing to the Competent Authority seeking permission to use Government Properties & premises in a format prescribed by the Government authority, before 3 days of the intended programme or procession.

(b) The Competent authority shall verify the application with other related departments and if necessary ask the applicant to obtain the no objection from the local authorities and other departments like PWD, Fire, Electricity etc.,

(c) The Competent authorities may also exercise the powers conferred under the Karnataka Police Act 1963 for regulation of use of Government properties and Premises and for preservation of order in and along government properties or premises.

(d) If the applicant meets the requisitions and instructions of the Competent authority then the application shall be disposed off



Scanned with OKEN Scanne

atleast a day prior to intended programme or procession by issuing a written order after provididng reasonable opportunity of hearing to the applicant.

(e) The applicant after getting the licence or permission from the Competent authority shall make preparation for such permitted programmes or processions.

(f) The applicant and the persons associated with him having responsibility to organise programmes or procession are liable to compensate and indemnify any loss or damage to public , government or private properties. Further they are jointly and saverelly liable for any criminal liability arise out of such programmes or processions.

II) **"Violation of this Government Order"**

If any person or persons, organisations, association or group of persons or any other person agency on their behalf, holds any programme or procession in Government properties in contravention of this Government Order, such programme or procession shall be considered as unlawful and assembly be treated as unlawful assembly as per the provisions of Bharatiya Nyaya Samhithe (BNS) 2023. The jurisdictional police officers shall take steps to prevent occurance of any congnizable offece as per the provisions of Bharatiya Nagarika Suraksha Samhita (BNSS) 2023 and in the event of any occurrence of offence then the jurisdictional police shall register a case either upon information of other person or suo-moto by invoking proper penal sections of Bharatiya Nyaya Samhithe (BNS)2023.

**III)** The appropriate, detailed guidelines shall be issued by the respective departments so as to ensure that the rights of the



Scanned with OKEN Scanner

constitutionally bound citizens are not compromised in the grant of such permission by the competent authorities.

This order is issued as per the Cabinet decision vide No.C.870/2025: dated: 16.10.2025.

By order and in the name of the
Governor of Karnataka,

(NAGARAJU S.)
Under Secretary to Government,
Home Department (Law and Order)

To:-

1. Additional Chief Secretary to Government, Urban Development Department, Vikasa Soudha, Bengaluru.
2. The Director General and Inspector General of Police, Nrupathunga Road, Bengaluru.
3. The Director General of Police, CID, Special Units & Economics Offences, No.1, Carlton House, Palace Road, Bengaluru.
4. Principal Secretary to Government, Department of Higher Education / Department of School Education and Literacy.
5. Secretary to Government, Rural Development & Panchayat Raj Department/ Urban Development Department/ Medical Education.
6. Additional Director General of Police, Admin./Law & Order, Crime and Technical Service, Nrupathunga Road, Bengaluru.
7. Director, State Intelligence, Nrupathunga Road, Bengaluru.
8. The Director, Directorate of Prosecutions and Govt. Litigation, Cauveri Bhavan, Bengaluru-560009
9. All the Deputy Commissioners/District Magistrates of the State
10. All the Commissioners of Police in the State (through DG & IGP)
11. All the Superintendent of Police of the State (through DG & IGP)
12. Guard File/Spare Copies.



Scanned with OKEN Scanne

**Copy for information to:**

1. The Additional Chief Secretary to Chief Minister, Vidhan Soudha, Bengaluru.
2. Personal Secretary to Home Minister, Vidhan Soudha, Bengaluru.
3. Personal Secretary to Chief Secretary to Government, Vidhan Soudha, Bengaluru.
4. Personal Secretary to Principal Secretary to Government(PCAS), Home Department, Vidhana Soudha, Bengaluru.
5. The Additional Secretary to Government (Cabinet) w.r.t. C.870/2025.

***



Scanned with OKEN Scann